ದಿನಾಂಕಃ 30-7-2019 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ ವಾದಿ ಪರ ಶ್ರೀ ಜೆ ಎಂ ಬಿ ವಕೀಲರಿಂದ ಃ-**

ನಾನು ನನ್ನ ಮುಖ್ಯ ವಿಚಾರಣೆ ಪ್ರಮಾಣಪತ್ರವನ್ನು ಸಲ್ಲಿಸಿದ್ದು ಅದರಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿದ್ದು ಅವುಗಳನ್ನು ನಾನೇ ಹೇಳಿ ಬರೆಯಿಸಿರುತ್ತೇನೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ನಾನು ಹಾಜರುಪಡಿಸಿರುವ ದಾಖಲಾತಿಗಳನ್ನು ನೋಡುತ್ತಿದ್ದು, ಅವುಗಳಲ್ಲಿ ನಮ್ಮ ಕುಟುಂಬದ ವಂಶವೃಕ್ಷದ ಬಗ್ಗೆ ನಾನು ನೋಟರಿಯವರ ಸಮಕ್ಷಮ ಪ್ರಮಾಣಿಕರಿಸಿದ ಪ್ರಮಾಣಪತ್ರವನ್ನು ನಿಪಿ-1 ಎಂದು, ದಾವಾ ಸ್ವತ್ತುಗಳ ಬಗ್ಗೆ 7 ಕೈ ಬರಹದ ಪಹಣಿಗಳು ಮತ್ತು 2 ಗಣಕಯಂತ್ರದ ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-2 ರಿಂದ 10 ಎಂದು, ನನ್ನ ತಂದೆ ಮತ್ತು ತಮ್ಮ ನಮಗೆ ತಿಳಿಯದಂತೆ ದಾವಾ ಸ್ವತ್ತುಗಳನ್ನು 3ನೇ ಪ್ರತಿವಾದಿಗೆ ಮಾರಾಟ ಮಾಡಿರುವ ಬಗ್ಗೆ ದಿಃ 02-03-2012 ರ ಕ್ರಯ ಪತ್ರದ ದೃಡೀಕೃತ ನಕಲನ್ನು ನಿಪಿ-11 ಎಂದು ಗುರುತಿಸಲಾಯಿತು.

(ವಕೀಲರು ಸಮಯ ಕೋರಿದ ಕಾರಣ ಪಾಟೀ ಸವಾಲು ಮುಂದೂಡಲಾಯಿತು)
(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇದೆ

ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ
ಪಾವಗಡ